



## ಆಯುಷ್ಮಾನ್ ಭಾರತ್: ಆರೋಗ್ಯ ಮತ್ತು ಕ್ಷೇಮ ಕೇಂದ್ರ



## ಸಮಗ್ರ ಆರೋಗ್ಯದ ಕಾಳಜಿ

# ಕೌಶಲ್ಯ ಮತ್ತು ಕಲಿಕೆಗೆ ಒತ್ತು

**ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳು ಜನತೆಯ ಸಮಗ್ರ ಆರೋಗ್ಯವನ್ನು ಕಾಪಾಡುವ ಮಹತ್ತರ ಉದ್ದೇಶ ಹೊಂದಿದ್ದು, ಈ ನಿಟ್ಟಿನಲ್ಲಿ ಬೇರುಮಟ್ಟದ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿವೆ. ವೈದ್ಯಾಧಿಕಾರಿಗಳಿಗೆ ತರಬೇತಿ ಮತ್ತು ಪುನರ್ ಮನನ ಕಾರ್ಯಕ್ರಮಳನ್ನೂ ಯೋಜಿಸಿದ್ದು, ಎಲ್ಲ ವಯೋಮಾನದವರಿಗೆ ಸಮಗ್ರ ಆರೋಗ್ಯ ಸೇವೆಗಳನ್ನು ಒದಗಿಸುವತ್ತ ಕರ್ನಾಟಕ ದಾಪುಗಾಲಿಟ್ಟಿದೆ.**

### ಹಿರಿಯ ನಾಗರಿಕರ ಉತ್ತಮ ಆರೋಗ್ಯಕ್ಕೆ ಹೆಚ್ಚಿನ ಒತ್ತು

ಹಿರಿಯ ನಾಗರಿಕರು ಸಾಮಾನ್ಯವಾಗಿ ತಮಗೆ ದೊರಕುವ ಪಿಂಚಣಿ, ಕಷ್ಟದಲ್ಲಿ ಉಳಿಸಿದ ಠೇವಣಿ ಮೇಲಿನ ಬಡ್ಡಿಯಲ್ಲಿ ಬದುಕು ಸಾಗಿಸುವುದರಿಂದ ಮತ್ತು ಬೇರೆ ಆದಾಯದ ಮೂಲ ಇಲ್ಲದಿರುವುದರಿಂದ ಅನಿರೀಕ್ಷಿತ ವೈದ್ಯಕೀಯ ವೆಚ್ಚವನ್ನು ಭರಿಸಲಾಗದೆ ಅಸಹಾಯಕರಾಗುತ್ತಾರೆ. ಬಹುತೇಕರಲ್ಲಿ ದೈಹಿಕ ಹಾಗೂ ಬಾಯಿಯ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಬಾಯಿಯ ಆರೋಗ್ಯವನ್ನು ನಿರ್ಲಕ್ಷಿಸಿದರೆ, ವ್ಯಕ್ತಿಯ ಆಹಾರಕ್ರಮದ ಮೇಲೆ ಪರಿಣಾಮ ಉಂಟಾಗುತ್ತದೆ. ಇದರಿಂದ ಅಪೌಷ್ಟಿಕತೆಗೆ ದಾರಿಯಾಗುತ್ತದೆ. ಇದರಿಂದಾಗಿ ಹಿರಿಯ ನಾಗರಿಕರ ಆರೋಗ್ಯಕ್ಕೂ ಆದ್ಯತೆ ನೀಡಲಾಗುತ್ತದೆ. ಇಲಾಖೆ ನೀಡುವ ಸೌಲಭ್ಯಗಳ ಮಾಹಿತಿ ಹಾಗೂ ವಿವಿಧ ಸೇವೆಗಳು ಇಲ್ಲಿ ದೊರೆಯಲಿವೆ.

### ಮಾನಸಿಕ ಆರೋಗ್ಯಕ್ಕೂ ಆದ್ಯತೆ

ಮಾನಸಿಕ ಅನಾರೋಗ್ಯದಿಂದ ಬಳಲುವ ಸಾಧ್ಯತೆಗಳಿಲ್ಲ ಎಂದು ಹೇಳುವಂತಿಲ್ಲ. ಕೌಟುಂಬಿಕ, ಸಾಮಾಜಿಕ ಮತ್ತು ವೃತ್ತಿ ಬದುಕಿನಿಂದ ಮಾನಸಿಕ ಅನಾರೋಗ್ಯಗಳು ಬರಬಹುದು. ಹೀಗಾಗಿ ಮಾನಸಿಕ ಆರೋಗ್ಯವನ್ನು ಕಡೆಗಣಿಸಬಾರದು. ಮಾನಸಿಕ ಅನಾರೋಗ್ಯ ದೈನಂದಿನ ಚಟುವಟಿಕೆಗಳ ಮೇಲೂ ಪ್ರಭಾವ ಬೀರಬಹುದು. ಇತ್ತೀಚಿನ ದಿನಗಳಲ್ಲಿ ತಂತ್ರಜ್ಞಾನ, ಆಧುನಿಕತೆ ಬೆಳೆಯುತ್ತಿದ್ದು, ವಿದ್ಯುನ್ಮಾನ ವಸ್ತುಗಳ ಬಳಕೆ ಹೆಚ್ಚಾಗಿ ಮಾನಸಿಕ ಖಿನ್ನತೆಯಿಂದ ಬಳಲುವವರ ಸಂಖ್ಯೆಯೂ ಹೆಚ್ಚುತ್ತಿದೆ. ವಿದ್ಯಾರ್ಥಿಗಳು, ಮಕ್ಕಳು ಹೆಚ್ಚಾಗಿ ಮೊಬೈಲ್ ಬಳಕೆ ಮಾಡುವುದು ಕೂಡ ಇದಕ್ಕೆ ಒಂದು ಕಾರಣ ಎಂದು ಹೇಳಬಹುದು. ಅದರಲ್ಲಿಯೂ ಮಾನಸಿಕ ಖಿನ್ನತೆಗೆ ಒಳಗಾದರವರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಇದರ ಬದಲು ಸೂಕ್ತ ಚಿಕಿತ್ಸೆ ಪಡೆಯುವುದರಿಂದ ಉತ್ತಮ ಆರೋಗ್ಯ ಕಾಪಾಡಬಹುದಾಗಿದೆ.

ಮಾನಸಿಕ ಆರೋಗ್ಯ ಸಮಸ್ಯೆ ಭಾರತದಲ್ಲಿ ಹೆಚ್ಚುತ್ತಿದೆ. ನಾಲ್ವರು ಭಾರತೀಯರಲ್ಲಿ ಒಬ್ಬರು ಜೀವನದ ಯಾವುದಾದರೂ ಒಂದು ಹಂತದಲ್ಲಿ ಮಾನಸಿಕ ಆರೋಗ್ಯ ಸಮಸ್ಯೆಗೆ ತುತ್ತಾಗುತ್ತಿದ್ದಾರೆ. ಗಂಭೀರ ಮಾನಸಿಕ ಸಮಸ್ಯೆಗಳಲ್ಲಿ ಶೇ 50 ರಷ್ಟು ಮತ್ತು ಸಾಮಾನ್ಯ ಮಾನಸಿಕ ಸಮಸ್ಯೆಗಳಲ್ಲಿ ಶೇ 10 ರಷ್ಟು ಪ್ರಕರಣಗಳು ಮಾತ್ರ ತಜ್ಞರ ಬಳಿ ಚಿಕಿತ್ಸೆಗೆ ದಾಖಲಾಗುತ್ತಿವೆ. ದೇಶದಲ್ಲಿ ಎಲ್ಲರೂ

